# Akashvani : Bangalore
# Regional Bulletin In Kannada
# 04.04.2026 / 18.40  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**04.04.2026 / 18.40   hrs**

**<><*<><>*><>**

## ಮುಖ್ಯಾಂಶಗಳು

**೧.	ಹೊಸ ಅವಕಾಶಗಳಿಗೆ ತಕ್ಕಂತೆ ಜ್ಞಾನ, ಕೌಶಲ್ಯ ವೃದ್ಧಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ**

**೨.	ಗ್ಯಾರಂಟಿ ಯೋಜನೆಗಳಿಗೆ ೩ ವರ್ಷಗಳಲ್ಲಿ ೧.೩೧ ಲಕ್ಷ ಕೋಟಿ ರೂಪಾಯಿ ಹಂಚಿಕೆ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೩.	ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ; ಅಭ್ಯರ್ಥಿಗಳ ಪರ ಮುಖಂಡರಿಂದ ಮತಯಾಚನೆ**

**೪.	ಕೊಡಗಿನಲ್ಲಿ ನಾಳೆಯಿಂದ ಒಂದು ತಿಂಗಳು ೨೬ನೇ ವರ್ಷದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ ; ೩೮೨ ತಂಡಗಳು ಭಾಗಿ**

**<><*<><>*><>**

ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಜನೆ ಕೇವಲ ಸಾಧನೆಗಾಗಿ ಮಾತ್ರವಲ್ಲ, ಸಮಾಜಸೇವೆಗೂ ಸಮರ್ಪಿಸಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ. ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ೫ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದು ತಂತ್ರಜ್ಞಾನ, ನಾವೀನ್ಯತೆ ಮತ್ತು ಜಾಗತಿಕ ಸ್ಪರ್ಧೆಯ ಯುಗವಾಗಿದೆ. ಕೃತಕಬುದ್ಧಿಮತ್ತೆ, ಡೇಟಾ ಸೆನ್ಸ್, ಜೈವಿಕ ತಂತ್ರಜ್ಞಾನ, ಹಸಿರು ಶಕ್ತಿ, ಸೈಬರ್ ಭದ್ರತೆ ಮುಂತಾದ ಕ್ಷೇತ್ರಗಳಲ್ಲಿ ಹೊಸ ಅವಕಾಶಗಳು ನಿರಂತರವಾಗಿ ಹೊರಹೊಮ್ಮುತ್ತಿದೆ. ಇಂತಹ ಕಾಲಮಾನದಲ್ಲಿ ಕಲಿಕೆಯ ಮೂಲಕ ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಬೆಂಗಳೂರು ದೇಶದ ತಂತ್ರಜ್ಞಾನ ರಾಜಧಾನಿ ಮತ್ತು ನಾವೀನ್ಯತೆಯ ಭೂಮಿ ಎಂದು ಪ್ರಸಿದ್ಧವಾಗಿದೆ. ಈ ಮಹಾನಗರವು ಮಾಹಿತಿ ತಂತ್ರಜ್ಞಾನದ ಕೇಂದ್ರ ಮಾತ್ರವಲ್ಲದೇ ಉದ್ಯಮಶೀಲತೆ, ಸಂಶೋಧನೆ, ನವೋದ್ಯಮ, ಸಂಸ್ಕೃತಿ ಮತ್ತು ಸೃಜನಶೀಲ ಚಿಂತನೆಗೆ ಪ್ರಮುಖ ಕೇಂದ್ರವಾಗಿದೆ. ಬೆಂಗಳೂರು ನಗರ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಬೆಂಗಳೂರಿನ ಮಹಾನಗರದ ವೈಶಿಷ್ಟ್ಯವನ್ನು ಮತ್ತಷ್ಟು ಬಲಪಡಿಸುತ್ತಾರೆಂಬ ವಿಶ್ವಾಸವಿದೆ ಎಂದು ರಾಜ್ಯಪಾಲರು ತಿಳಿಸಿದ್ದಾರೆ.

**<><*<><>*><>**

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಸಾಮಾಜಿಕ ಬದ್ಧತೆಯನ್ನು ಒದಗಿಸುವ ಹೂಡಿಕೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.  ಬಾಗಲಕೋಟೆಯಲ್ಲಿ ಉಪಚುನಾವಣೆ ಪ್ರಚಾರದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಗ್ಯಾರಂಟಿ ಯೋಜನೆಗಳ ವಿರುದ್ಧ ಸೋಲಿನ ಭಯದಿಂದ ಅಪಪ್ರಚಾರ ನಡೆಸುತ್ತಿದೆ ಎಂದು ಆರೋಪಿಸಿದರು. ಅಭಿವೃದ್ಧಿ ಎಂದರೆ ಕೇವಲ ರಸ್ತೆ, ಸೇತುವೆ, ಕಟ್ಟಡಗಳು ಮಾತ್ರವಲ್ಲದೆ, ಜನರಿಗೆ ಆರ್ಥಿಕ ಹಾಗೂ

ಸಾಮಾಜಿಕ ಭದ್ರತೆ ಒದಗಿಸುವುದೂ ಆಗಿದೆ ಎಂದು ಗ್ಯಾರಂಟಿ ಯೋಜನೆಗಳನ್ನು ಸಮರ್ಥಿಸಿಕೊಂಡರು. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಇದುವರೆಗೆ ೧.೩೧ ಲಕ್ಷ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದ್ದು, ಇದರ ಜೊತೆಗೆ ನೀರಾವರಿ, ಗ್ರಾಮೀಣಾಭಿವೃದ್ಧಿ ಸೇರಿದಂತೆ ಇತರ ಕ್ಷೇತ್ರಗಳ ವೆಚ್ಚ ಕಡಿಮೆಯಾಗಿಲ್ಲ. ಕಳೆದ ವರ್ಷದ ೪೨ ಸಾವಿರ ಕೋಟಿ ವೆಚ್ಚವನ್ನು ಈ ವರ್ಷ ೪೪,೦೦೦ ಕೋಟಿಗೆ ಹೆಚ್ಚಿಸಲಾಗಿದೆ ಎಂದರು.   ಸಾಲದ ವಿಚಾರದಲ್ಲಿ ಬಿಜೆಪಿ ಮಾಡುತ್ತಿರುವ ಆರೋಪಗಳನ್ನು ತಳ್ಳಿಹಾಕಿದ ಮುಖ್ಯಮಂತ್ರಿಗಳು, ರಾಜ್ಯದ ಸಾಲ ಜಿಡಿಪಿಯ ಶೇಕಡ ೨೪.೯೪ರಷ್ಟು ಮಾತ್ರವಿದ್ದು, ಅದು ನಿಗದಿತ ಮಿತಿಯೊಳಗೇ ಇದೆ. ರಾಜ್ಯದಲ್ಲಿ ಆರ್ಥಿಕ ಶಿಸ್ತು ಸಂಪೂರ್ಣವಾಗಿ ಕಾಪಾಡಿಕೊಂಡಿದ್ದೇವೆ ಎಂದರು.

**<><*<><>*><>**

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಬಹಿರಂಗ ಪ್ರಚಾರ ಅಂತ್ಯಕ್ಕೆ ಇನ್ನು ಮೂರು ದಿನ ಬಾಕಿಯಿದ್ದು, ಅಭ್ಯರ್ಥಿಗಳ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ವಿವಿಧ ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡುತ್ತಿದ್ದಾರೆ. ದಾವಣಗೆರೆಯಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಕ್ಷೇತ್ರದ ವಿವಿಧ ಕಡೆಗಳಲ್ಲಿ ಕೇಂದ್ರ ಸಚಿವರಾದ ವಿ.ಸೋಮಣ್ಣ, ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ,  ಎಂ.ಪಿ.ರೇಣುಕಾಚಾರ್ಯ, ಸಿ.ಸಿ.ಪಾಟೀಲ್, ಕೇಂದ್ರ ಮಾಜಿ ಸಚಿವ ಡಾ.ಜಿ.ಎಂ.ಸಿದ್ದೇಶ್ವರ ಮತ ಯಾಚಿಸಿದರು. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಮಲ್ಲಿಕಾರ್ಜುನ್ ಪರವಾಗಿ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್ತ ಹಾಗೂ ರಾಜ್ಯ ಗ್ಯಾರಂಟಿ ಸಮಿತಿಯ ರಾಜ್ಯಾಧ್ಯಕ್ಷ ಹೆಚ್.ಎಂ ರೇವಣ್ಣ ಸೇರಿದಂತೆ ಹಲವು ಶಾಸಕರು ಮತ ಯಾಚಿಸಿದರು.

**<><*<><>*><>**

ರಾಜ್ಯದ ಬಾಗಲಕೋಟೆ, ದಾವಣಗೆರೆ ದಕ್ಷಿಣ ಎರಡೂ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಜಯ ನಿಶ್ಚಿತವಾಗಿದ್ದು, ಉಪಚುನಾವಣೆ ಫಲಿತಾಂಶವು ಮುಂದಿನ ಸಾರ್ವತ್ರಿಕ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದು ಬಿಜೆಪಿ ಶಾಸಕ ವಿ. ಸುನೀಲ್ ಕುಮಾರ್ ಹೇಳಿದ್ದಾರೆ. ಬಾಗಲಕೋಟೆಯ ವಿದ್ಯಾಗಿರಿಯಲ್ಲಿ ಬಿಜೆಪಿ ಅಭ್ಯರ್ಥಿ ಪರ ಮತಯಾಚನೆ ವೇಳೆ ಮಾತನಾಡಿದ ಅವರು, ಉತ್ತರ ಕರ್ನಾಟಕ ಭಾಗದಲ್ಲಿ ಬಿಜೆಪಿ ಪರ ಉತ್ತಮ ವಾತಾವರಣವಿದ್ದು, ಜನರಿಗೆ ಅಭಿವೃದ್ಧಿ ಕಾರ್ಯಗಳ ಅರಿವು ಇದೆ. ಆದರೆ, ಕಾಂಗ್ರೆಸ್ ಸರ್ಕಾರ ತನ್ನ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಬಿಜೆಪಿ ಮೇಲೆ ವ್ಯರ್ಥ ಆರೋಪ ಮಾಡುತ್ತಿದೆ ಎಂದು ಟೀಕಿಸಿದರು. ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರದ   ಆಡಳಿತದ ವಿರುದ್ಧ ಈಗಾಗಲೇ ಜನರು ಅಸಮಾಧಾನಗೊಂಡಿದ್ದು, ಗ್ಯಾರಂಟಿ ಯೋಜನೆಗಳಿಗಾಗಿ ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನ ಬಳಸಿರುವುದು ಏಕೆಂದು ಕಾಂಗ್ರೆಸ್ ನಾಯಕರನ್ನು ಅವರು ಪ್ರಶ್ನಿಸಿದರು.

**<><*<><>*><>**

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಕಳೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಂದ ಮತಗಳಿಗಿಂತ ಉಪಚುನಾವಣೆಯಲ್ಲಿ ಹೆಚ್ಚು ಮತ ಬೀಳಲಿದ್ದು, ತಮ್ಮ ಪಕ್ಷದ ಅಭ್ಯರ್ಥಿಗಳು ಹೆಚ್ಚು ಮತಗಳ ಅಂತರದಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉಪಚುನಾವಣೆಯಲ್ಲಿ ಎರಡೂ ಕ್ಷೇತ್ರಗಳಲ್ಲಿ ತಮ್ಮ ಪಕ್ಷದ ಕಾರ್ಯಕರ್ತರು ಬಹಳ ಚೆನ್ನಾಗಿ ಕೆಲಸ

ಮಾಡುತ್ತಿದ್ದಾರೆ. ಪ್ರತಿ ಮನೆ ಮನೆಗೆ ಹೋಗಿ ಗ್ಯಾರಂಟಿ ಯೋಜನೆಗಳ ಬಗ್ಗೆ ಮನವರಿಕೆ ಮಾಡುತ್ತಿದ್ದಾರೆ. ಗ್ಯಾರಂಟಿ ಫಲಾನುಭವಿಗಳಲ್ಲಿ ಕಳೆದ ಬಾರಿ ಬಿಜೆಪಿಗೆ ಮತ ಹಾಕಿರುವವರು ಕೂಡ ಈ ಬಾರಿ ಕಾಂಗ್ರೆಸ್ಸಿಗೆ ಬೆಂಬಲಿಸುವುದಾಗಿ ತಿಳಿಸಿದ್ದಾರೆ ಎಂದು ಅವರು ಹೇಳಿದರು.

**<><*<><>*><>**

ಚಾಮರಾಜನಗರದಲ್ಲಿ ವಾಣಿಜ್ಯ ಬಳಕೆಯ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗಿಲ್ಲ; ಬೇಡಿಕೆ ಅನುಸಾರ ನಿತ್ಯವೂ ಪೂರೈಕೆಯಾಗುತ್ತಿದೆ ಎಂದು ಚಾಮರಾಜನಗರದ ಶೃಂಗಾರ್ ಸಾಗರ್ ಹೋಟೆಲ್‌ನ ವ್ಯವಸ್ಥಾಪಕ ಸಿದ್ದರಾಜು ತಿಳಿಸಿದ್ದಾರೆ. ತಮಗೆ ಭಾರತ್ ಗ್ಯಾಸ್ ಪೂರೈಕೆಯಾಗುತ್ತಿದ್ದು, ಈವರೆಗೂ ಯಾವುದೇ ಸಮಸ್ಯೆ ಉಂಟಾಗಿಲ್ಲ, ಹೋಟೇಲ್‌ಗೆ ನೂರಾರು ಮಂದಿ ಗ್ರಾಹಕರು ನಿತ್ಯವು ಬರುತ್ತಿದ್ದು, ಅವರಿಗೆ ಎಂದಿನಂತೆ ಸೇವೆ ನೀಡಲಾಗುತ್ತಿದೆ ಎಂದು ಸಿದ್ದರಾಜು ಹೇಳಿದರು. ಎಚ್.ಪಿ .ಸಿಲಿಂಡರ್ ವಿತರಕ ಮೋಹನ್ ಮಾತನಾಡಿ, ಗ್ರಾಹಕರಿಗೆ ಸಮರ್ಪಕವಾಗಿ ಎಲ್‌ಪಿಜಿ ಸಿಲಿಂಡರ್ ಪೂರೈಕೆ ಮಾಡಲಾಗುತ್ತಿದೆ. ಯಾವುದೇ ವ್ಯತ್ಯಯ ಉಂಟಾಗಿಲ್ಲ. ಆತಂಕದಿಂದ ಗ್ರಾಹಕರು ಸಿಲಿಂಡರ್ ಬುಕ್ ಮಾಡಿದ್ದರಿಂದ ಸಮಸ್ಯೆ ಉಂಟಾಗಿದೆ. ವಿನಃ, ಯಾವುದೇ ಸಮಸ್ಯೆಯಿಲ್ಲ. ಗ್ರಾಹಕರಿಂದ ಒಟಿಪಿ ಪಡೆದು ಸಿಲಿಂಡರ್ ವಿತರಣೆ ಮಾಡಲಾಗುತ್ತಿದ್ದು ಬೇಡಿಕೆಗೆ ಅನುಸಾರವಾಗಿ ದಾಸ್ತಾನು ಬರುತ್ತಿದೆ ಎಂದು ಮೋಹನ್ ತಿಳಿಸಿದರು.

**<><*<><>*><>**

ಗೃಹಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗಿಲ್ಲ. ಗ್ಯಾಸ್ ಬುಕ್ ಮಾಡಿದ ಎರಡು ದಿನಗಳಿಗೆ ಸಿಲಿಂಡರ್ ಪೂರೈಕೆಯಾಗಿದೆ. ಯಾವುದೇ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಗ್ರಾಹಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕ್ರಮಕೈಗೊಂಡಿವೆ ಎಂದು ಕೋಲಾರದ ಗಾಂಧಿನಗರ ನಿವಾಸಿ ಚೇತನ್‌ಬಾಬು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**<><*<><>*><>**

ಭಾರತೀಯ ಜನಗಣತಿ-೨೦೨೭ಕ್ಕೆ ಹಾಸನ ಜಿಲ್ಲೆ ಭರ್ಜರಿ ಸಿದ್ಧತೆ ಕೈಗೊಂಡಿದ್ದು, ಆಡಳಿತಾತ್ಮಕ ಮಟ್ಟದಲ್ಲಿ ತರಬೇತಿ, ಮಾನವ ಸಂಪನ್ಮೂಲ ನಿಯೋಜನೆ, ಜೊತೆಗೆ ತಾಂತ್ರಿಕ ವ್ಯವಸ್ಥೆಗಳ ರೂಪುರೇಷೆಗಳನ್ನು ಪೂರ್ಣಗೊಳಿಸಿದೆ ಎಂದು ಹಾಸನ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ. ತಮ್ಮ ಕಚೇರಿಯಲ್ಲಿಂದು ನಡೆಸಿದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ, ಜನಗಣತಿಗಾಗಿ ಜಿಲ್ಲೆಯಲ್ಲಿ ಒಟ್ಟು ೨೬ ಚಾರ್ಜ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಈಗಾಗಲೇ ಮೈಸೂರು ಮತ್ತು ಹಾಸನದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿಷಯ ನಿರ್ವಾಹಕರು ಮತ್ತು ತಾಂತ್ರಿಕ ಸಹಾಯಕರಿಗೆ ವಿಶೇಷ ಸೂಕ್ತ ತರಬೇತಿ ನೀಡಲಾಗಿದೆ ಎಂದರು. ಜನಗಣತಿ ದೇಶದ ಅಭಿವೃದ್ಧಿಗೆ ಮೂಲಭೂತ ಮಾಹಿತಿ ಒದಗಿಸುವ ಮಹತ್ವದ ಪ್ರಕ್ರಿಯೆ. ಪ್ರತಿಯೊಬ್ಬ ನಾಗರಿಕರೂ ಸ್ವಯಂ ಗಣತಿಯಲ್ಲಿ ಭಾಗವಹಿಸಿ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಜನಗಣತಿ ೨೦೨೭ ರ ಅಂಗವಾಗಿ ಜನಗಣಿತಿಯಲ್ಲಿ ಭಾಗವಹಿಸುವ ಸಿಬ್ಬಂದಿಗೆ ತರಬೇತಿ ಹಮ್ಮಿಕೊಳ್ಳಲಾಗಿತ್ತು. ತಹಶೀಲ್ದಾರ್ ಮಲ್ಲಪ್ಪ ಕೆ.ಯರಗೋಳ ಚಾಲನೆ ನೀಡಿ ಮಾತನಾಡಿ, ಜನಗಣತಿ ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು ಎಲ್ಲರೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕಿದೆ. ರಾಷ್ಟ್ರದ ಅಭಿವೃದ್ಧಿಯಲ್ಲಿ ಜನಗಣತಿ ಪ್ರಮುಖವಾಗಿದೆ ಎಂದು ಹೇಳಿದರು.

**<><*<><>*><>**

೧. ಬೆಂಗಳೂರಿನ ಹಳೆ ಮದ್ರಾಸು ರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿರುವವರ ವಿರುದ್ಧ ದಂಡ ವಿಧಿಸಿ, ತೆರವು ಕಾರ್ಯಾಚರಣೆ ನಡೆಸುವುದರ ಜೊತಗೆ ಸುಗಮ ಪಾದಚಾರಿ ಮಾರ್ಗವನ್ನು ನಿರ್ಮಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೨. ಜಿಲ್ಲಾ ಕೇಂದ್ರವಾದ ಚಿಕ್ಕಬಳ್ಳಾಪುರ ನಗರದ ಪ್ರಮುಖ ರಸ್ತೆಗಳಾದ ಬಜಾರ್ ರಸ್ತೆ ಮತ್ತು ಗಂಗಮ್ಮನಗುಡಿ ರಸ್ತೆಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಅಗಲೀಕರಣ ಮಾಡಲಿದ್ದು, ಅಗಲೀಕರಣಕ್ಕೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲವನ್ನು ಈಗಾಗಲೇ ಕ್ರೋಢೀಕರಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

೩. ೨೦೨೫-೨೬ನೇ ಆರ್ಥಿಕ ವರ್ಷದಲ್ಲಿ ಚಿಕ್ಕಮಗಳೂರು ಜಿಲ್ಲೆಯ ಎಲ್ಲ ೯ ತಾಲ್ಲೂಕುಗಳು ಶೇಕಡ ೧೦೦ ರಷ್ಟು ಕಂದಾಯ ವಸೂಲಾತಿ ಮಾಡಿದ್ದು, ಶೇಕಡ ೧೦೪.೯೮ ರಷ್ಟು ಸಾಧನೆ ಮೂಲಕ ಜಿಲ್ಲೆಯು ರಾಜ್ಯಕ್ಕೆ ಮೂರನೇ ಸ್ಥಾನವನ್ನು ಪಡೆದಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎಸ್. ಕೀರ್ತನಾ ತಿಳಿಸಿದ್ದಾರೆ.

**<><*<><>*><>**

ಕೊಡಗು ಜಿಲ್ಲೆಯ ನಾಪೋಕ್ಲು ಗ್ರಾಮದಲ್ಲಿ ನಾಳೆಯಿಂದ ಒಂದು ತಿಂಗಳವರೆಗೆ ೨೬ನೇ ವರ್ಷದ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ ನಡೆಯಲಿದೆ. ಈ ಬಾರಿ ಕೊಡವ ಕುಟುಂಬಗಳಿಗೆ ಸೇರಿದ ೩೮೨ ತಂಡಗಳು ಹಾಕಿ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳುತ್ತಿವೆ. ಚೇನಂಡ ಕುಟುಂಬದವರು ಈ ವರ್ಷದ ಹಾಕಿಯನ್ನು ಆಯೋಜಿಸಿದ್ದು ಅಂತಿಮ ಹಂತದ ಸಿದ್ಧತೆಗಳು ನಾಪೋಕ್ಲುವಿನಲ್ಲಿ ನಡೆದಿದೆ. ಮಹಿಳೆಯರಿಗಾಗಿಯೂ ಪ್ರತ್ಯೇಕವಾಗಿ ಹಾಕಿ ಪಂದ್ಯಾಟ ಆಯೋಜಿತವಾಗಿದ್ದು ೫೦ ತಂಡಗಳು ಪಾಲ್ಗೊಳ್ಳುತ್ತಿವೆ. ೩೦ ಸಾವಿರ ಮಂದಿ ಹಾಕಿ ಪಂದ್ಯಾಟ ವೀಕ್ಷಿಸಲು ಗ್ಯಾಲರಿ ವ್ಯವಸ್ಥೆ ಮಾಡಲಾಗಿದೆ. ೨೬ ವರ್ಷಗಳ ಇತಿಹಾಸದಲ್ಲಿ ೬ನೇ ಬಾರಿಗೆ ನಾಪೋಕ್ಲು ಗ್ರಾಮದಲ್ಲಿ ಕೌಟುಂಬಿಕ ಹಾಕಿ ಪಂದ್ಯಾವಳಿ ನಡೆಯುತ್ತಿರುವುದ ವಿಶೇಷವಾಗಿದೆ. ನಾಳಿನ ಪಂದ್ಯಾವಳಿಗೆ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ, ಶಾಸಕ ಎ.ಎಸ್. ಪೊನ್ನಣ್ಣ ಚಾಲನೆ ನೀಡಲಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**